# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 826 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:21-04-2018

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

ಮಾನ್ಯರೆ,

**ವಿಷಯ:** ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಭೂ ಪರಿವರ್ತಿತ ಜಮೀನುಗಳಲ್ಲಿನ ಒಂದು ಎಕರೆಗಿಂತ ಕಡಿಮೆ ಇರುವ ಪ್ರದೇಶಗಳಲ್ಲಿ ವಿನ್ಯಾಸ ನಕ್ಷೆ ಅನುಮೋದನೆ ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 86 ಗ್ರಾಪಂಅ 2014 ದಿನಾಂಕ:11-11-2014.
2. ಸರ್ಕಾರದ ಸುತ್ತೋಲೆ-4 ಸಂಖ್ಯೆ: ಗ್ರಾಅಪ 09 ಗ್ರಾಪಂಅ 2016 ದಿನಾಂಕ:16-04-2016.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರ ಮತ್ತು ಸುತ್ತೋಲೆಗಳಲ್ಲಿ ದಿನಾಂಕ: 11-11-2014 ರಲ್ಲಿ ಹೊರಡಿಸಿರುವ ಪತ್ರದಲ್ಲಿನ ಮಾರ್ಗಸೂಚಿಗಳಲ್ಲಿ ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಇರುವ ಪ್ರದೇಶ ಮತ್ತು ಏಕನಿವೇಶನ ವಸತಿ / ವಸತಿಯೇತರಗಾಗಿ ಭೂ ಪರಿವರ್ತಿತ ಜಮೀನುಗಳಲ್ಲಿನ ವಿನ್ಯಾಸ ಅನುಮೋದನೆಗಾಗಿ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳು, ಅನುಸರಿಸಬೇಕಾದ ವಿಧಾನಗಳ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯು ನಿಗಧಿಪಡಿಸಿದ ಹಾಗೂ ಸೂಚಿತ ಮಾರ್ಗಸೂಚನೆಯನ್ವಯ ಶುಲ್ಕಗಳನ್ನು ಹಾಗೂ ಬಡಾವಣೆಗೆ ಗ್ರಾಮ ಪಂಚಾಯ್ತಿಯಿಂದಲೇ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಅರ್ಜಿದಾರರು ಒಪ್ಪಿಗೆ ನೀಡಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸುವ ಕಾಮಗಾರಿಗಳಿಗೆ ತಗಲುವ ಅಂದಾಜು ಪಟ್ಟಿಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಪಡೆದುಕೊಂಡು ಅಂದಾಜು ಪಟ್ಟಿಯಂತೆ ಅಭಿವೃದ್ಧಿ ಶುಲ್ಕವನ್ನು ಪಾವತಿಸುವ ಬಗ್ಗೆ ಅರ್ಜಿದಾರರಿಗೆ / ಅಭಿವೃದ್ಧಿದಾರರಿಗೆ ತಿಳುವಳಿಕೆ ನೀಡಿ ಮುಂಗಡವಾಗಿ ಪಂಚಾಯ್ತಿಗೆ ಪಾವತಿಸಿಕೊಳ್ಳಬೇಕಾಗಿರುತ್ತದೆ.

ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಭೂ ಪರಿವರ್ತಿತ ಜಮೀನುಗಳಲ್ಲಿನ ಒಂದು ಎಕರೆಗಿಂತ ಕಡಿಮೆ ಇರುವ ಪ್ರದೇಶಗಳಲ್ಲಿ ವಿನ್ಯಾಸ ನಕ್ಷೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಅಥವಾ ನೋಂದಾಯಿತ ಖಾಸಗಿ ವಾಸ್ತು ಶಿಲ್ಪಿಗಳಿಂದ ಅನುಮೋದನೆ ಮಾಡಿಸಿಕೊಳ್ಳಬಹುದೆಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ಮುಂದುವರೆದು, ಜಿಲ್ಲಾ ಪಂಚಾಯತಿಗಳಲ್ಲಿ ಅರ್ಹ ನೋಂದಾಯಿತ ಖಾಸಗಿ ವಾಸ್ತು ಶಿಲ್ಪಿಗಳಿಂದ ಈ ಉದ್ದೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿ ಪರಿಶೀಲಿಸಿ ಅರ್ಹ ಯಾದಿ ಅನುಮೋದನೆ ಮಾಡಿಕೊಂಡು ನಿಗದಿತ ಶುಲ್ಕ ನಿರ್ದಿಷ್ಟಪಡಿಸಿಕೊಂಡು ಅವರುಗಳಿಂದ ವಿನ್ಯಾಸ ನಕ್ಷೆ ತಯಾರಿಸಲು ಕ್ರಮ ಕೈಗೊಳ್ಳುವಂತೆ ಸಹ ತಿಳಿಸಿದೆ.

ತಮ್ಮ ನಂಬುಗೆಯ,

21/4/18

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಹೊರಡಿಸಿದೆ 24/4 ದಿನಾಂಕ
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ